# ಕನ್ನಡ ಸಾಹಿತ್ಯ ಪರಿಷತ್ತು

ಪಂಪ ಮಹಾಕವಿ ರಸ್ತೆ, ಚಾಮರಾಜಪೇಟೆ, ಬೆಂಗಳೂರು – ೫೬೦ ೦೧೮
ದೂರವಾಣಿ : ೦೮೦ ೨೬೬೧೨೯೯೧, ೨೬೬೨೩೫೮೪  ಫ್ಯಾಕ್ಸ್ : ೨೬೫೨೩೮೬೭
http://www.kasapa.in  e-mail : kannadaparishattu@gmail.com


ಕ್ರಮಸಂಖ್ಯೆ : ಕಸಾಪ / **ಪ್ರಕಟಣೆ**/ ೨೦೨೩–೨೪ ದಿನಾಂಕ : ೦೬-೦೪-೨೦೨೩

*ಇವರಿಗೆ*
**ಸಂಪಾದಕರು / ಮುಖ್ಯ ವರದಿಗಾರರು**
……………………………………….ಬೆಂಗಳೂರು

ಪ್ರಕಟಣೆಯ ಕೃಪೆಗಾಗಿ

## ಏ.೧೦ ರಂದು ಕನ್ನಡ ಸಾಹಿತ್ಯ ಪರಿಷತ್ತಿನ ವಿಶೇಷ ಸಂಶೋಧನಾ ಉಪನ್ಯಾಸ

ಬೆಂಗಳೂರು: ಕನ್ನಡ ಸಾಹಿತ್ಯ ಪರಿಷತ್ತು ಶಾಸನಶಾಸ್ತ್ರ ಸಂಶೋಧನಾ ವಿದ್ಯಾರ್ಥಿಗಳಿಗಾಗಿ ಎಪ್ರಿಲ್ ೧೦ರಂದು ಸೋಮವಾರ ಬೆಳಗ್ಗೆ ೧೦.೩೦ಗಂಟೆಗೆ ಕನ್ನಡ ಸಾಹಿತ್ಯ ಪರಿಷತ್ತಿನ ಶ್ರೀಕೃಷ್ಣರಾಜ ಪರಿಷತ್ತಿನ ಮಂದಿರದಲ್ಲಿ ವಿಶೇಷ ಉಪನ್ಯಾಸ ಕಾರ್ಯಕ್ರಮವನ್ನು ಹಮ್ಮಿಕೊಂಡಿದೆ. ಈ ವಿಶೇಷ ಉಪನ್ಯಾಸ ಕಾರ್ಯಕ್ರಮದಲ್ಲಿ ಸಂಶೋಧನಾಸಕ್ತರು, ವಿದ್ಯಾರ್ಥಿಗಳು, ಕನ್ನಡಾಭಿಮಾನಿಗಳು ಹಾಗೂ ಆಸಕ್ತರು ಭಾಗವಹಿಸಬೇಕೆಂದು ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾದ ನಾಡೋಜ ಡಾ. ಮಹೇಶ ಜೋಶಿ ಅವರು ಪ್ರಕಟಣೆಯಲ್ಲಿ ಕೋರಿದ್ದಾರೆ.

ಕನ್ನಡ ಭಾಷೆ, ಸಾಹಿತ್ಯ, ಸಂಸ್ಕೃತಿ, ಕಲೆ, ಜನಪದ ಮತ್ತು ಕನ್ನಡ-ಕನ್ನಡಿಗ-ಕರ್ನಾಟಕದ ಅಭಿವೃದ್ಧಿ ಹಿತರಕ್ಷಣೆಯ ಆಶಯದಿಂದ ೧೯೧೫ರಲ್ಲಿ ಸ್ಥಾಪಿತವಾದ ಕನ್ನಡ ಸಾಹಿತ್ಯ ಪರಿಷತ್ತು, ನಾಡಿನ ಸಾಹಿತ್ಯ ಮತ್ತು ಸಾಂಸ್ಕೃತಿಕ ಕ್ಷೇತ್ರದಲ್ಲಿ ಕಳೆದ ೧೦೮ ವರ್ಷಗಳಿಂದ ನಿರಂತರವಾಗಿ ಸೇವೆ ಮಾಡುತ್ತ ಬಂದಿದೆ. ಈ ಹಿನ್ನೆಲೆಯಲ್ಲಿ ಸಂಶೋಧನಾಸಕ್ತರಿಗೆ, ವಿದ್ಯಾರ್ಥಿಗಳಿಗೆ, ಪ್ರಯೋಜನಕಾರಿಯಾಗುವಂತಹ ವಿವಿಧ ವಿಷಯಗಳಿಗೆ ಸಂಬಂಧಿಸಿದ ಮಹತ್ವದ ವಿಷಯಗಳ ಕುರಿತು **ಸಂಶೋಧನಾ ಉಪನ್ಯಾಸಗಳನ್ನು** ಆಯಾ ಕ್ಷೇತ್ರದ ನುರಿತ ವಿದ್ವಾಂಸರುಗಳಿಂದ ಏರ್ಪಡಿಸಲಾಗಿದೆ. ಕನ್ನಡ ಯುವ ಜನತೆಯಲ್ಲಿ ಶಾಸನಶಾಸ್ತ್ರ, ಸಂಶೋಧನಾ ಅಧ್ಯಯನದ ಬಗೆಗೆ ಆಸಕ್ತಿಯನ್ನು ಮೂಡಿಸಲು **ಖ್ಯಾತ ಸಂಶೋಧಕರು ಹಾಗೂ ಹಿರಿಯ ಸಾಹಿತಿಗಳಾದ ನಾಡೋಜ ಡಾ. ಹಂಪ ನಾಗರಾಜಯ್ಯ** ಅವರು **ಕನ್ನಡ ಸಾಹಿತ್ಯ ಪರಿಷತ್ತಿನಲ್ಲಿ** ಶಾಸನಶಾಸ್ತ್ರ/ ಪದವಿಯಲ್ಲಿ ಕನ್ನಡ ಐಚ್ಛಿಕ ವಿಷಯವನ್ನು ಅಭ್ಯಸಿಸುತ್ತಿರುವ ವಿದ್ಯಾರ್ಥಿಗಳಿಗೆ ಅಧ್ಯಯನಕ್ಕೆ ಅನುಕೂಲವಾಗುವಂತೆ ಸಂಶೋಧನಾ ಕಮ್ಮಟವನ್ನು ಏರ್ಪಡಿಸಲು ದತ್ತಿ ಸ್ಥಾಪಿಸಿದ್ದು, ಅವರ ಆಶಯದಂತೆ ಈ ಕಾರ್ಯಕ್ರಮವನ್ನು ಹಮ್ಮಿಕೊಳಲಾಗಿದೆ ಎಂದು ನಾಡೋಜ ಡಾ. ಮಹೇಶ ಜೋಶಿ ತಿಳಿಸಿದ್ದಾರೆ.

ಈ ಸಂಬಂಧ ದಿನಾಂಕ ೧೦-೦೪-೨೦೨೩ರ ಸೋಮವಾರ ಬೆಳಗ್ಗೆ ೧೦.೩೦ಕ್ಕೆ ಕನ್ನಡ ಸಾಹಿತ್ಯ ಪರಿಷತ್ತಿನ ಶ್ರೀಕೃಷ್ಣರಾಜ ಪರಿಷತ್ತಿನ ಮಂದಿರದಲ್ಲಿ ಹಮ್ಮಿಕೊಂಡ ಉಪನ್ಯಾಸ ಕಾರ್ಯಕ್ರಮದಲ್ಲಿ **ಹಿರಿಯ ಸಂಶೋಧಕರಾದ ಡಾ. ದೇವರಕೊಂಡಾರೆಡ್ಡಿ ಹಾಗೂ ಶ್ರೀ ಕೆ. ಧನಪಾಲ್** ಅವರು **'ಶಾಸನಗಳ ಇತ್ತೀಚಿನ ಶೋಧಗಳು' (ಭಾಗ-೧ ಹಾಗೂ ಭಾಗ-೨)** ಕುರಿತು ತಲಾ ಒಂದು ಗಂಟೆಗಳ ಕಾಲ ಉಪನ್ಯಾಸವನ್ನು ನೀಡಲಿದ್ದಾರೆ ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**ಶ್ರೀನಾಥ್ ಜೆ.**
ಮಾಧ್ಯಮ ಸಲಹೆಗಾರರು
ಕನ್ನಡ ಸಾಹಿತ್ಯ ಪರಿಷತ್ತು
ಬೆಂಗಳೂರು